

ಅರುಣ ಪಿ. ಭಟ್ಟ


## ವಾರಭವಿಷ್ಯ: 17.07.2025ರಿಂದ 23.07.2025ರವರೆಗೆ




ಶ್ರಮದ ಕೆಲಸಗಳಿಂದ ಸಾರ್ಥಕತೆಯ ಭಾವನೆ ನಿಮ್ಮಲ್ಲಿ ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ. ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಬಾಕಿ ಕೆಲಸಗಳನ್ನು ಪೂರ್ಣಗೊಳಿಸುತ್ತೀರಿ. ನಿಮ್ಮ ಪೋಷಕರ ಸಂತೋಷಕ್ಕೆ ನೀವು ಕಾರಣರಾಗುತ್ತೀರಿ. ಕೌಟುಂಬಿಕವಾಗಿ ನೆಮ್ಮದಿಯಾಗಿ ಇರುತ್ತೀರಿ. ಶುಭದಿನ: 18. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ನೀವು ಮಾಡುವ ಕೆಲಸದಲ್ಲಿ ಉತ್ತಮ ಆದಾಯ ವೃದ್ಧಿಯಾಗಲಿದೆ. ನೀವು ಒಬ್ಬರಿಗೆ ಒಳ್ಳೆಯದು ಬಯಸಿದರೆ ಅದನ್ನು ಕೆಲವರು ಅಪಾರ್ಥ ಮಾಡಿಕೊಳ್ಳಬಹುದು. ಇನ್ನೊಬ್ಬರಿಗೆ ಬುದ್ಧಿವಾದ ಹೇಳುವ ಮೊದಲು ಆತ ಕೇಳುಗನಾಗಿದ್ದಾನೆಯೇ ಎಂದು ಅರಿತುಕೊಳ್ಳಿ. ಮನೆಯ ಹಿರಿಯರ ಒಲುಮೆ ಗಳಿಸಿಕೊಳ್ಳುವಿರಿ. ನಿಮ್ಮ ನಡತೆಯು ಹೆಚ್ಚು ಪ್ರಶಂಸೆಗೆ ಒಳಪಡುವುದು. ಶುಭದಿನ: 19. ಆದಿತ್ಯ ಹೃದಯ ಪಠಿಸಿರಿ.





ನಿಮ್ಮ ಜಡತ್ವ ಕರಗಿ ಹೋಗಲಿದೆ. ವಿನಯದ ಸ್ವಭಾವದಿಂದ ಹೆಚ್ಚಿನ ಹೆಸರು ಸಂಪಾದನೆ ಮಾಡಲಿದ್ದೀರಿ. ಸಂಗಾತಿಯ ಬಯಕೆಗಳಿಗೆ ನೀವು ಸಮ್ಮತಿಯ ವಾಗ್ದಾನ ನೀಡಲಿದ್ದೀರಿ. ಮಕ್ಕಳ ವರ್ತನೆಗಳು ನಿಮ್ಮ ಮನದಲ್ಲಿ ಬೇಸರ ತರಿಸಲಿದೆ. ಕೆಲಸದ ಸಮಯದಲ್ಲಿ ನೀವು ವಿಶೇಷ ಯಶಸ್ಸನ್ನು ಪಡೆಯುತ್ತೀರಿ. ಸ್ನೇಹಿತರ ಬೆಂಬಲ ನಿಮಗೆ ದೊರೆಯುವುದು. ಶುಭದಿನ: 22. ಸೌಂದರ್ಯ ಲಹರಿ ಪಠಿಸಿರಿ.





ಮಾಡುವ ಕೆಲಸದಲ್ಲಿ ಅನಗತ್ಯವಾಗಿ ತೊಂದರೆ ಬರಬಹುದು. ಆದಷ್ಟು ಸಮಸ್ಯೆಗೆ ಪರಿಹಾರ ಹುಡುಕಿ ಮತ್ತು ಕೆಲವು ಕಾರ್ಯಗಳನ್ನು ನೀವೇ ನಿಂತು ಮಾಡುವುದು ಒಳಿತು. ಸಾಲ ವಸೂಲಾತಿಯಲ್ಲಿ ನಿಮ್ಮ ನಿರೀಕ್ಷೆ ಹುಸಿಯಾಗಲಿದೆ. ನಿಮ್ಮ ಬುದ್ಧಿ ಬಲದಿಂದ ಪದೋನ್ನತಿ ಸಿಗುವುದು. ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಓದು ಮುಂದುವರಿಕೆಯ ಬಗ್ಗೆ ಚಿಂತನೆ ನಡೆಸುವಿರಿ. ಶುಭದಿನ: 20. ಕಾಲಭೈರವನ ಆರಾಧನೆ ಮಾಡಿರಿ.




ವಿವೇಚನಾರಹಿತ ಹೂಡಿಕೆಗಳಿಂದ ಧನ ನಷ್ಟ ಆಗುವ ಸಂಭವ. ನಿಮ್ಮದೇ ವಿಚಾರ ನಡೆಯಬೇಕೆಂಬ ವಾದವು ಅತಿಶಯೋಕ್ತಿಯಾಗಿ ಕಾಣಬಹುದು. ನಿಮ್ಮಲ್ಲಿ ಹೊಳೆಯುವ ಆಲೋಚನೆ ಉತ್ತಮ ಪರಿಕಲ್ಪನೆಯಾಗಿದ್ದು ಇದರಿಂದ ಅನುಕೂಲಗಳು ಕಾಣಸಿಗಲಿದೆ. ನೀವು ನಿಮ್ಮ ಮಕ್ಕಳ ಮೇಲೆ ಇಟ್ಟಿರುವ ಭರವಸೆ ಕಾರ್ಯರೂಪಕ್ಕೆ ಬರುವುದು. ಶುಭದಿನ: 21. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ





ಉತ್ತಮ ಗಳಿಕೆ ಇದ್ದರೂ ಕೆಲವೊಂದು ವಿಷಯಗಳಲ್ಲಿ ನಿಮ್ಮ ದುಡುಕುತನ ದೊಡ್ಡ ಪೆಟ್ಟನ್ನು ನೀಡಬಹುದು. ನಿಮ್ಮ ಮನೋಕಾಮನೆಗಳನ್ನು ಆದಷ್ಟು ನಿಯಂತ್ರಣ ಮಾಡುವುದು ಒಳ್ಳೆಯದು. ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆಗಳು ಕಂಡುಬರುತ್ತವೆ. ಒಂದು ದೊಡ್ಡದಾದ ಯೋಜನೆಯೊಂದು ನಿಮ್ಮ ಬುದ್ಧಿ ಕೌಶಲ್ಯಕ್ಕೆ ಎದುರಾಗುವುದು. ಶುಭದಿನ: 22. ಹನುಮಾನ್ ಚಾಲೀಸ್ ಪಠಿಸಿರಿ.




ಅತಿಯಾದ ಆಸಕ್ತಿ ತೋರಿಸುವುದು ಒಳ್ಳೆಯದಲ್ಲ. ಯೋಜನೆಗಳ ವಿಸ್ತರಣೆಗೆ ಅವಕಾಶಗಳು ಸಿಗುವ ಸಾಧ್ಯತೆ. ಟೀಕಿಸುವಂತಹ ಜನರ ಕುರಿತು ಆತಂಕ ಪಡಬೇಕಾಗಿಲ್ಲ. ನಿಮ್ಮ ಸುತ್ತಮುತ್ತಲ ಜನರೇ ನಿಮ್ಮನ್ನು ಅಡ್ಡಹಾದಿಗೆ ಎಳೆಯುತ್ತಾರೆ. ನಿಮ್ಮ ಬಳಿ ಬರುವ ಜನರ ಬಗ್ಗೆ ಎಚ್ಚರದಿಂದಿರಿ. ಉತ್ತಮ ವೈವಾಹಿಕ ಸಂಬಂಧ ಒದಗಿಬರುವ ಸಾಧ್ಯತೆ ಇದೆ. ಶುಭದಿನ: 23. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.





ಆರ್ಥಿಕವಾಗಿ ಬೆಳವಣಿಗೆ ಸಾಧಿಸುವಿರಿ. ರಾಜೀ ಪಂಚಾಯಿತಿಗಳಿಗೆ ಹೋಗದಿರುವುದು ತುಂಬಾ ಸೂಕ್ತ. ಸುಖಾಸುಮ್ಮನೆ ಕದನಕ್ಕೆ ಬರುವಂತಹ ಜನಗಳು ಕಂಡುಬರುತ್ತಾರೆ. ಸಂಗಾತಿಯ ಜೊತೆಗೆ ಖರೀದಿ ಪ್ರಕ್ರಿಯೆಗಳನ್ನು ಮಾಡಲು ಇಚ್ಛಿಸುತ್ತೀರಿ. ಮೂಟೆ ಕಾಳು ಚೆಲ್ಲಿ ಮುಷ್ಟಿ ಕಾಳನ್ನು ಪಡೆಯುವಂತೆ ಹಣ ಖರ್ಚಾಗುವುದು. ಮಾನಸಿಕ ಸಮಸ್ಯೆಯನ್ನು ದೂರವಿಡಿ. ಶುಭದಿನ: 19. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.




ನಿಮ್ಮ ಸಾಮರ್ಥ್ಯವನ್ನು ಸಂಪೂರ್ಣವಾಗಿ ಬಳಸಿಕೊಳ್ಳುತ್ತೀರಿ. ಆ ಮೂಲಕ ಹಲವು ಕಾರ್ಯಗಳನ್ನು ಪೂರ್ಣಗೊಳಿಸುತ್ತೀರಿ. ನಿಮ್ಮ ಸಾಮಾಜಿಕ ಸ್ಥಾನಮಾನದಲ್ಲಿ ಏರಿಕೆ ಆಗಲಿದೆ. ವಾರದ ಅಂತ್ಯಕ್ಕೆ ಸರಿಯುತ್ತಾ ದೈಹಿಕ ನೋವುಗಳು ಕಾಡುತ್ತವೆ. ವಾದ–ವಿವಾದಗಳು ಒತ್ತಡ ಏರ್ಪಡುತ್ತದೆ. ದೈಹಿಕ ಮತ್ತು ಮಾನಸಿಕ ಸಮತೋಲನವನ್ನು ಕಾಪಾಡಿಕೊಳ್ಳಿ. ಶುಭದಿನ: 21. ಚಂಡಿ ಪಾರಾಯಣ ಮಾಡಿರಿ.




ಹೊಸ ಯೋಜನೆಗೆ ಈ ವಾರ ಸಿದ್ಧತೆ ನಡೆಸುವುದು ಒಳ್ಳೆಯದು. ಆರ್ಥಿಕ ಸಹಕಾರಕ್ಕಾಗಿ ಆತ್ಮೀಯರ ಬಳಿ ಕೇಳುವ ಸಾಧ್ಯತೆ ಇದೆ. ಭೂಮಿಯ ವಿಷಯದಲ್ಲಿ ಉತ್ತಮ ವ್ಯವಹಾರ ನಡೆಸುವ ಸಾಧ್ಯತೆ ಕಂಡುಬರುತ್ತದೆ. ಆಲಸ್ಯತನ ತೋರುವುದರಿಂದ ಕೆಲಸ ಕಾರ್ಯಗಳಲ್ಲಿ ಹಿನ್ನಡೆಯನ್ನು ಅನುಭವಿಸಬೇಕಾಗುವುದು. ಸಂಬಂಧಗಳಲ್ಲಿ ಸಂತಸ ಇರುತ್ತದೆ. ಶುಭದಿನ: 20. ಮಾರುತಿ ಉಪಾಸನೆ ಪೂಜೆ ಮಾಡಿರಿ.




ಈ ವಾರ ಸೋಲಿನಿಂದ ಗೆಲುವಿನ ಕಡೆಗೆ ಸಾಗುವಿರಿ. ಸಂತೋಷದ ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ. ಕುಟುಂಬದಲ್ಲಿ ಅನಿರೀಕ್ಷಿತ ಸಂಕಷ್ಟ ಎದುರಾಗಬಹುದು. ದೃಢಮನಸ್ಸಿನಿಂದ ಕಾರ್ಯಗಳಲ್ಲಿ ಸಫಲರಾಗುವಿರಿ. ಸಮಸ್ಯೆಗಳ ಸುಳಿಯಿಂದ ಹೊರಬರುವ ಪ್ರಯತ್ನ ಮೆಚ್ಚುವಂಥದ್ದು. ಮನೆಗೆ ನೆಂಟರಿಷ್ಟರ ಆಗಮನ ಸಾಧ್ಯತೆ. ಶುಭದಿನ: 18. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಕೌಟುಂಬಿಕ ಸಮಸ್ಯೆಗಳು ಸರಿಹೋಗಲಿವೆ. ಉದ್ಯೋಗದ ಸ್ಥಿತಿಗತಿಗಳು ಚೇತರಿಕೆಯತ್ತ ಸಾಗುತ್ತವೆ. ಉದ್ಯೋಗದಲ್ಲಿ ಪ್ರಗತಿ ಸಾಧ್ಯತೆ ಇದೆ. ಹಣಕಾಸಿನ ವ್ಯವಹಾರದಲ್ಲಿ ನಿಮ್ಮ ಸಾಮರ್ಥ್ಯ ಹೆಚ್ಚಿನ ಪ್ರಶಂಸೆಯನ್ನು ತಂದುಕೊಡುವುದು. ನಿಮ್ಮ ವಿಶಾಲ ಮನಸ್ಥಿತಿಯು ದೊಡ್ಡ ದೊಡ್ಡ ಕಾರ್ಯಗಳನ್ನು ಲೀಲಾಜಾಲವಾಗಿ ಮಾಡಿ ಮುಗಿಸುತ್ತದೆ. ಕಲಾವಿದರಿಗೆ ದೊಡ್ಡ ಯಶಸ್ಸು. ಶುಭದಿನ: 19. ವಿಷ್ಣು ಸಹಸ್ರನಾಮ ಮಾಡಿರಿ.